Akashvani : Bangalore
Regional Bulletin In Kannada
25.03.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
****************

ಮುಖ್ಯಾಂಶಗಳು

೧. ಎಲ್‌ಪಿಜಿ ಮರುಪೂರಣ ಬುಕ್ಕಿಂಗ್ ಅವಧಿಯಲ್ಲಿ ಯಾವುದೇ ಬದಲಾವಣೆ ಇಲ್ಲ ; ಕೇಂದ್ರ ಸರ್ಕಾರ ಸ್ಪಷ್ಟನೆ

೨. ಪ್ರಸಕ್ತ ಸಾಲಿನ ಆಯವ್ಯಯ ವಿತ್ತಿಯ ಶಿಸ್ತನ್ನು ಹಾಳು ಮಾಡಿಲ್ಲ - ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥನೆ

೩. ಪರಿಷತ್ ಸದಸ್ಯ ಭೀಮರಾವ್ ಪಾಟೀಲ್‌ಗೆ ಕಚೇರಿ ನೀಡದ ಬೀದರ್ ಜಿಲ್ಲಾಧಿಕಾರಿ - ನಾಳೆ ಖುದ್ದು ಹಾಜರಾಗುವಂತೆ ಸಭಾಪತಿ ಸೂಚನೆ

೪. ಅಜಿತ್ ಪವಾರ್ ವಿಮಾನ ಅಪಘಾತ ಪ್ರಕರಣ ; ಬೆಂಗಳೂರಿನಲ್ಲಿ ದಾಖಲಾಗಿದ್ದ ಶೂನ್ಯ ಎಫ್‌ಐಆರ್, ಮಹಾರಾಷ್ಟ್ರ ಪೊಲೀಸರಿಗೆ ವರ್ಗ

೫. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯ ಹಿನ್ನೆಲೆ ; ಬೆಂಗಳೂರು ಪೊಲೀಸರಿಂದ ಸಂಚಾರ ಸಲಹೆ ಬಿಡುಗಡೆ

****************

ಪ್ರಧಾನಮಂತ್ರಿ ಉಜ್ವಲ ಯೋಜನೆ ಸಂಪರ್ಕಗಳಿಗೆ ಎಲ್‌ಪಿಜಿ ಮರುಪೂರಣ ಬುಕ್ಕಿಂಗ್ ಸಮಯವನ್ನು ೪೫ ದಿನಗಳಿಗೆ ಪರಿಷ್ಕರಿಸಲಾಗಿದೆ ಎಂಬ ವರದಿ ಸುಳ್ಳು ಎಂದು ಕೇಂದ್ರ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಸ್ಪಷ್ಟಪಡಿಸಿದೆ. ದೇಶದಲ್ಲಿ ಎಲ್‌ಪಿಜಿ ದಾಸ್ತಾನು ಸಮರ್ಪಕವಾಗಿದೆ ಎಂದು ತಿಳಿಸಿದೆ.

ಏಕ ಸಿಲಿಂಡರ್ ಬಳಕೆದಾರರಿಗೆ ೧೫ ದಿನಗಳು ಮತ್ತು ಡಬಲ್ಸ್ ಸಿಲಿಂಡರ್ ಗ್ರಾಹಕರಿಗೆ ೩೫ ದಿನಗಳಿಗೆ ಮರುಪೂರಣ ಬುಕ್ಕಿಂಗ್ ಸಮಯಾವಧಿಯನ್ನು ಬದಲಾಯಿಸಲಾಗಿದೆ ಎಂಬ ಮಾಧ್ಯಮ ವರದಿಗಳು ಸುಳ್ಳು ಎಂದು ಹೇಳಿದೆ.

ಅಸ್ತಿತ್ವದಲ್ಲಿರುವ ಮಾನದಂಡಗಳ ಪ್ರಕಾರ ನಗರ ಪ್ರದೇಶಗಳಲ್ಲಿ

೧೫ ದಿನಗಳ ನಂತರ ಗ್ರಾಮೀಣ ಪ್ರದೇಶಗಳಲ್ಲಿ ೪೫ ದಿನಗಳ ನಂತರ ಎಲ್‌ಪಿಜಿ ಮರುಪೂರಣಗಳನ್ನು ಬುಕ್ ಮಾಡಬಹುದು ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

*****************

೨೦೨೬-೨೭ನೇ ಸಾಲಿನ ಬಜೆಟ್‌ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಸಮರ್ಥಿಸಿಕೊಂಡಿದ್ದಾರೆ. ವಿಧಾನಸಭೆಯಲ್ಲಿಂದು ಬಜೆಟ್ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ವಿತ್ತಿಯ ಶಿಸ್ತನ್ನು ಹಾಳು ಮಾಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯ ಮುಂಗಡ ಪತ್ರವು ತುಂಬಿದ ಕೊಡವೇ ಹೊರತು ಖಾಲಿ ಚೊಂಬು ಆಗಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಪ್ರತಿಪಕ್ಷಗಳು ಟೀಕೆ ಮಾಡಿದ ಮಾತ್ರಕ್ಕೆ ಮಾವಿನಹಣ್ಣು ಬೇವಿನ ಹಣ್ಣಾಗಲು ಸಾಧ್ಯವಿಲ್ಲ. ಬೇವಿನಹಣ್ಣು ಮಾವಿನ ಹಣ್ಣಾಗಲೂ ಸಾಧ್ಯವಿಲ್ಲ. ಹಾಗೆಯೇ ಈ ಪ್ರತಿಪಕ್ಷಗಳು ಟೀಕೆ ಮಾಡಿದ ಮಾತ್ರಕ್ಕೆ ಬಜೆಟ್‌ನ ಗಂಭೀರತೆಯು ಹಾಳಾಗುವುದಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

೨೦೨೬-೨೭ನೇ ಸಾಲಿನ ಮುಂಗಡಪತ್ರವು ೪ ಲಕ್ಷದ ೪೮ ಸಾವಿರದ ೪ ಕೋಟಿ ರೂಪಾಯಿಗಳಷ್ಟಾಗಲಿದೆ. ಕಳೆದ ವರ್ಷದ ಆಯವ್ಯಯಕ್ಕೆ ಹೋಲಿಸಿದರೆ ಈ ಆಯವ್ಯಯವು ೩೮

ಸಾವಿರದ ೪೫೫ ಕೋಟಿ ರೂಪಾಯಿಗಳಷ್ಟು ಹೆಚ್ಚಿನ ಗಾತ್ರದ್ದಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

ಅಕ್ಕಪಕ್ಕದ ರಾಜ್ಯಗಳಿಗೆ ಹೋಲಿಸಿದರೆ ರಾಜ್ಯದ ರಾಜಸ್ವ ಸಂಗ್ರಹ ಉತ್ತಮವಾಗಿದೆ. ಎಲ್ಲಾ ಅಭಿವೃದ್ಧಿ ಹೊಂದಿದ ಆರ್ಥಿಕತೆಗಳಲ್ಲೂ ಸಾಲ ದೊಡ್ಡ ಪ್ರಮಾಣದಲ್ಲೇ ಇದೆ. ಆದರೆ ಮಾಡುವ ಸಾಲ, ಜನರ ಕಲ್ಯಾಣಕ್ಕಾಗಿ ಮತ್ತು ನಾಡಿನ ಕಲ್ಯಾಣಕ್ಕಾಗಿ ಬಳಕೆಯಾಗಬೇಕು ಎಂದು ತಿಳಿಸಿದ್ದಾರೆ.

*****************

ವಿಧಾನ ಪರಿಷತ್ ಸದಸ್ಯ ಭೀಮರಾವ್ ಪಾಟೀಲ್ ಅವರಿಗೆ ನಾಲ್ಕೂವರೆ ವರ್ಷ ಕಳೆದರೂ ಕಚೇರಿ ಒದಗಿಸದ ಬೀದರ್ ಜಿಲ್ಲಾಧಿಕಾರಿ ನಾಳೆ ತಮ್ಮ ಕಚೇರಿಯಲ್ಲಿ ಖುದ್ದು ಹಾಜರಿರಬೇಕು ಎಂದು ಸಭಾಪತಿ ಬಸವರಾಜ್ ಹೊರಟ್ಟಿ ಮೇಲ್ಮನೆಯಲ್ಲಿ ಸೂಚನೆ ನೀಡಿದ್ದಾರೆ.

ಕಲಾಪ ಅರಂಭಗೊಂಡ ಕೂಡಲೇ ಕಾಂಗ್ರೆಸ್ ಸದಸ್ಯ ಪುಟ್ಟಣ್ಣ ಅವರು ಭೀಮರಾವ್ ಪಾಟೀಲ್ ಅವರು ಮೇಲ್ಮನೆಗೆ ಆಯ್ಕೆಯಾಗಿ ಬಂದು ನಾಲ್ಕೂವರೆ ವರ್ಷ ಕಳೆದರೂ ಅವರಿಗೆ ಕಚೇರಿಯನ್ನು ನೀಡದೇ ಜಿಲ್ಲಾಧಿಕಾರಿಗಳು ನಿರ್ಲಕ್ಷ್ಯ ತೋರಿದ್ದಾರೆ ಎಂದರು. ಕೂಡಲೇ ಜಿಲ್ಲಾಧಿಕಾರಿಗೆ ಸಮನ್ಸ್ ನೀಡಿ ನಾಳೆಯೇ ಸದನಕ್ಕೆ ಕರೆಸುವಂತೆ ಪುಟ್ಟಣ್ಣ ಒತ್ತಾಯಿಸಿದರು.

ಆಡಳಿತ ಪಕ್ಷದ ಮುಖ್ಯ ಸಚೇತಕ ಸಲೀ ಅಹಮದ್ ಅವರು ಭೀಮರಾವ್ ಪಾಟೀಲ್ ಅವರಿಗೆ ನಾಲ್ಕು ವರ್ಷ ಕಳೆದರೂ ಕಚೇರಿ ನೀಡದಿರುವುದು ಸದನದ ಸದಸ್ಯರಿಗೆ ಮಾಡಿರುವ ಅಪಮಾನ. ಕೂಡಲೇ ಕ್ರಮ ತೆಗೆದುಕೊಳ್ಳಿ ಎಂದು ಒತ್ತಾಯಿಸಿದರು.

ಸದಸ್ಯ ಭೀಮರಾವ್ ಪಾಟೀಲ್ ಮಾತನಾಡಿ, ಅವರು ನಾಲ್ಕೂವರೆ ವರ್ಷದಿಂದ ಜನರ ಕೆಲಸ ಮಾಡಲು ಅನುಕೂಲವಾಗುವಂತೆ ಔರಾದ್ ತಾಲೂಕಿನಲ್ಲಿ ಕಚೇರಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಮೂರು ಬಾರಿ ಪತ್ರ ಬರೆದರೂ ಪ್ರಯೋಜನವಾಗಿಲ್ಲ. ಇದು ನನಗೆ ಹಾಗೂ ಸದನಕ್ಕೆ ಮಾಡಿದ ಅವಮಾನ ಎಂದು ಅಳಲು ತೋಡಿಕೊಂಡರು.

ಸಭಾನಾಯಕ ಭೋಸರಾಜ್ ಅವರು ಮುಖ್ಯ ಕಾರ್ಯದರ್ಶಿ ಮುಖಾಂತರ ಜಿಲ್ಲಾಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗುವುದು ಎಂದು ಹೇಳಿದರು

ಈ ವೇಳೆ ಮಧ್ಯಪ್ರವೇಶಿಸಿದ ಸಭಾಪತಿ ಬಸವರಾಜ್ ಹೊರಟ್ಟಿ ಅವರು ಬೀದರ್ ಜಿಲ್ಲಾಧಿಕಾರಿಗಳು ನಾಳೆ ತಮ್ಮ ಕಚೇರಿಯಲ್ಲಿ ಖುದ್ದು ಹಾಜರಿರಬೇಕು ಎಂದು ಆದೇಶ ನೀಡಿದ್ದಾರೆ.

*****************

ವಿಧಾನಸಭೆಯಿಂದ ಅಂಗೀಕಾರಗೊಂಡ ಸರ್ಕಾರಿ ಶೈಕ್ಷಣಿಕ ಸಂಸ್ಥೆಗಳು ಬಳಸುತ್ತಿರುವ ಭೂಮಿಯ ರಕ್ಷಣೆ ಮತ್ತು ಸಕ್ರಮಾತಿ ವಿಧೇಯಕವನ್ನು ಮೇಲ್ಮನೆಯಲ್ಲಿಂದು ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಂಡಿಸಿದರು.

ವಿಧೇಯಕ ಮಂಡಿಸಿದ ಸಚಿವರು ಈ ವಿಧೇಯಕದಿಂದ ದಾನ ನೀಡಿದ ಭೂಮಿ ಹಾಗೂ ನಿವೇಶನಗಳಲ್ಲಿ ೧೨ ವರ್ಷಗಳ ಕಾಲ ಶಾಲೆ ನಡೆಸಿದ್ದರೆ ಅದನ್ನು ಶಿಕ್ಷಣ ಇಲಾಖೆಗೆ ಸೇರಿಸುವ ವಿಧೇಯಕ ಇದಾಗಿದೆ ಎಂದು ಹೇಳಿದರು.

ವಿಧೇಯಕವನ್ನು ಸ್ವಾಗತಿಸಿ ಸದಸ್ಯರಾದ ಟಿ.ಡಿ.ಶ್ರೀನಿವಾಸ್, ಭೋಜೇಗೌಡ, ಸರವಣ, ಶಶಿಲ್ ನಮೋಶಿ, ವಿಧೇಯಕವು ಕಾಯ್ದೆಯಾಗಿ ಮಾರ್ಪಾಡು ಮಾಡಬೇಕು ಎಂದು ಸಲಹೆ ನೀಡಿದರು.

****************

ಎನ್‌ಸಿಪಿ ನಾಯಕ ಮತ್ತು ಮಹಾರಾಷ್ಟ್ರ ಉಪಮುಖ್ಯಮಂತ್ರಿ ದಿವಂಗತ ಅಜಿತ್ ಪವಾರ್ ಅವರ ವಿಮಾನ ಅಪಘಾತ ಪ್ರಕರಣದ ಕುರಿತಂತೆ ಬೆಂಗಳೂರಿನಲ್ಲಿ ದಾಖಲಾಗಿದ್ದ ಶೂನ್ಯ ಎಫ್‌ಐಆರ್ ಅನ್ನು ರಾಜ್ಯ ಪೊಲೀಸರು ಮಹಾರಾಷ್ಟ್ರ ಪೊಲೀಸ್ ಇಲಾಖೆಗೆ ವರ್ಗಾಯಿಸಿದ್ದಾರೆ.

ಪ್ರಕರಣದ ದಾಖಲೆಗಳನ್ನು ವರ್ಗಾವಣೆಯ ಭಾಗವಾಗಿ ಕಳುಹಿಸಲಾಗಿದೆ. ರಾಜ್ಯದ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕ ಪಿ.ಹರಿಶೇಖರನ್ ಈ ಸಂಬಂಧ ಮಹಾರಾಷ್ಟ್ರ ಪೊಲೀಸ್ ಮಹಾ ನಿರ್ದೇಶಕರಿಗೆ ಪತ್ರ ಬರೆದಿದ್ದು, ಈ ಪ್ರಕರಣವನ್ನು ಬಾರಾಮತಿ ಗ್ರಾಮೀಣಾ ಪೊಲೀಸ್ ಠಾಣೆಗೆ ವರ್ಗಾಯಿಸುವಂತೆ ಕೋರಿದ್ದಾರೆ.

ಮಾರ್ಚ್ ೨೩ ರಂದು ಬೆಂಗಳೂರಿನ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಅಜಿತ್ ಪವಾರ್ ಸೋದರಳಿಯ ಮಹಾರಾಷ್ಟ್ರದ ಶಾಸಕ ರೋಹಿತ್ ರಾಜೇಂದ್ರ ಪವಾರ್ ದೂರು ದಾಖಲಿಸಿದ್ದರು.

****************

ಇದೇ ೨೮ಕ್ಕೆ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆರ್‌ಸಿಬಿ ಹಾಗೂ ಸನ್ ರೈಸರ್ಸ್ ಹೈದರಾಬಾದ್ ಮಧ್ಯೆ ಐಪಿಎಲ್ ಉದ್ಘಾಟನಾ ಪಂದ್ಯ ನಡೆಯಲಿದೆ.

ಮುನ್ನೆಚ್ಚರಿಕಾ ಕ್ರಮವಾಗಿ ಬೆಂಗಳೂರಿನಲ್ಲಿ ಪೊಲೀಸರು ಭಾರೀ ಭದ್ರತೆ ಒದಗಿಸಿದ್ದು, ಸಂಚಾರ ಸಮಸ್ಯೆ ನಿರ್ವಹಣೆಗೂ ಕ್ರಮ ಕೈಗೊಂಡಿದ್ದಾರೆ. ಅಭಿಮಾನಿಗಳ ಸುರಕ್ಷತೆ ಹಾಗೂ ಸುಗಮ ಸಂಚಾರಕ್ಕಾಗಿ ಹಲವು ಪ್ರಮುಖ ರಸ್ತೆಗಳಲ್ಲಿ ಇದೇ ೨೮ ರಂದು ಸಂಚಾರ ನಿರ್ಬಂಧ ಹೇರಲಾಗಿದೆ.

ಕ್ವೀನ್ಸ್ ರಸ್ತೆ, ಬಾಳೆಕುಂದ್ರಿ ರಸ್ತೆ, ಎಂ.ಜಿ.ರಸ್ತೆಯನ್ನು ಸಂಪೂರ್ಣ ನಿರ್ಬಂಧಿಸಲಾಗಿದೆ. ರಾಜಭವನ, ಟಿ.ಚೌಡಯ್ಯ ರಸ್ತೆ, ರೇಸ್‌ಕೋರ್ಸ್ ರಸ್ತೆಯನ್ನು ನಿಷೇಧಿಸಲಾಗಿದೆ. ಪಂದ್ಯದ ದಿನ ಸಾರ್ವಜನಿಕರು ಸಾಧ್ಯವಾದಷ್ಟು ಮೆಟ್ರೊ ಬಳಸುವಂತೆ ಪೊಲೀಸರು ಮನವಿ ಮಾಡಿದ್ದಾರೆ.

*****************

ದಾವಣಗೆರೆ ದಕ್ಷಿಣ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ಮಾಗಾನಹಳ್ಳಿ ಚೆಕ್ ಪೋಸ್ಟ್‌ನಲ್ಲಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ ೧ ಲಕ್ಷದ ೧೨ ಸಾವಿರ ರೂಪಾಯಿ ನಗದು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶೇಖರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚನ್ನಪಟ್ಟಣದಿಂದ ಅಕ್ಕಿ ಹಿಟ್ಟು ಖರೀದಿ ಮಾಡಲು ಈ ಹಣವನ್ನು ತಂದಿದ್ದಾಗಿ ತಿಳಿಸಿದ್ದಾರೆ. ಆದರೆ, ಹಣದ ಮೂಲಕ್ಕೆ ಸಂಬಂಧಿಸಿದಂತೆ ಯಾವುದೇ ಅಧಿಕೃತ ದಾಖಲೆಗಳು ಇಲ್ಲದ ಕಾರಣ ನಗದನ್ನು ವಶಕ್ಕೆ ಪಡೆಯಲಾಗಿದೆ ಎಂದು ಅವರು ಹೇಳಿದ್ದಾರೆ.

ಜಿಲ್ಲೆಯಾದ್ಯಂತ ಒಟ್ಟು ೧೧ ಚೆಕ್‌ಪೋಸ್ಟ್‌ಗಳನ್ನು ನಿರ್ಮಿಸಲಾಗಿದೆ. ಪರವಾನಗಿ ರಹಿತ ಮದ್ಯ ಮಾರಾಟದ ಮೇಲೆ ದಾಳಿ ನಡೆಸಿ ೨೨ ಲೀಟರ್ ಮದ್ಯ ವಶಪಡಿಸಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಧ್ವನಿ : ವರಿಷ್ಠಾಧಿಕಾರಿ ಶೇಖರ್

*****************

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಟ್ಟು ೨೨ ಸಾವಿರದ ೪೮೩ ಮಂದಿಗೆ ಎಚ್‌ಪಿವಿ ಲಸಿಕಾ ಲಸಿಕೆ ನೀಡುವ ಗುರಿ ಹೊಂದಲಾಗಿದೆ.  ಈ ಪೈಕಿ ಇದುವರೆಗೆ ೫೨೮ ಮಂದಿಗೆ ಲಸಿಕೆ ನೀಡಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಚ್.ಆರ್. ತಿಮ್ಮಯ್ಯ ತಿಳಿಸಿದ್ದಾರೆ.

ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವ ಉದ್ದೇಶದಿಂದ ಭಾರತ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಾಲಯವು ಎಚ್‌ಪಿವಿ ಲಸಿಕಾ ಅಭಿಯಾನ ಆರಂಭಿಸಿದ್ದು, ದಕ್ಷಿಣ ಕನ್ನಡ ಜಿಲ್ಲೆಯಲ್ಲಿಯೂ ಯಶಸ್ವಿಯಾಗಿ ನೀಡಲಾಗುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

೧೪ ವರ್ಷ ಪೂರ್ಣಗೊಂಡಿದ್ದು, ೧೫ ವರ್ಷ ಪೂರ್ಣವಾಗದ ಹೆಣ್ಣುಮಕ್ಕಳಿಗೆ ಈ ಅಭಿಯಾನದಲ್ಲಿ ಲಸಿಕೆ ನೀಡಲಾಗುತ್ತಿದೆ. ಇದು ೩ ತಿಂಗಳ ಅಭಿಯಾನವಾಗಿದ್ದು, ಮೇ ತಿಂಗಳವರೆಗೆ ನಡೆಯಲಿದೆ. ಜಿಲ್ಲೆಯಲ್ಲಿ ಒಟ್ಟು ಜನಸಂಖ್ಯೆಯ ಶೇಕಡ ೧ರಷ್ಟು ಮಂದಿಗೆ ಅಂದರೆ ೨೨ ಸಾವಿರದ ೪೭೩ ಹೆಣ್ಮ್ಕಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದೆ.

****************

ಕೃಷಿ ಉತ್ಪನ್ನಗಳಿಗೆ ವೈಜ್ಞಾನಿಕ ಕನಿಷ್ಠ ಬೆಂಬಲ ಬೆಲೆ ನಿಗದಿ ಮಾಡಿ, ವರ್ಷಪೂರ್ತಿ ಖರೀದಿ ವ್ಯವಸ್ಥೆ ಕಲ್ಪಿಸಿದರೆ ರೈತರಿಗೆ ನ್ಯಾಯ ಸಿಗಲಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ಮುಖಂಡ ಕೋಡಿಹಳ್ಳಿ ಚಂದ್ರಶೇಖರ್ ತಿಳಿಸಿದ್ದಾರೆ.

ಯಾದಗಿರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಡ್ಡಾಯವಾಗಿ ಆವರ್ತ ನಿಧಿ ಸ್ಥಾಪಿಸಿ, ಎಲ್ಲ ಎಪಿಎಂಸಿಗಳಲ್ಲಿ ನಿರಂತರ ಖರೀದಿ ಕೇಂದ್ರಗಳನ್ನು ಆರಂಭಿಸಬೇಕು ಎಂದು ಸಲಹೆ ನೀಡಿದ್ದಾರೆ.

ಎಂ.ಎಸ್. ಸ್ವಾಮಿನಾಥನ್ ಆಯೋಗದ ಶಿಫಾರಸುಗಳನ್ನು ಉಲ್ಲೇಖಿಸಿದ ಅವರು, ಉತ್ಪಾದನಾ ವೆಚ್ಚಕ್ಕೆ ಶೇಕಡ ೫೦ರಷ್ಟು ಲಾಭ ಸೇರಿಸಿ ಕನಿಷ್ಠ ಬೆಂಬಲ ಬೆಲೆ ನಿಗದಿ ಮಾಡಬೇಕು ಎಂಬ ಶಿಫಾರಸು ಬಂದು ೨೮ ವರ್ಷಗಳಾದರೂ ಇದುವರೆಗೂ ಜಾರಿಗೆ ತರಲು ಸರ್ಕಾರಗಳು ಪ್ರಯತ್ನಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

****************